**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.181/2023.**

ಪಿರ್ಯಾದುದಾರರುಃ- ಸಾಮರಸ್ಯ ಪತ್ತಿನ ಸೌಹಾರ್ದ ಸಹಕಾರಿ ಸಂಘ (ಲಿ).,
ರಥಬೀದಿ ಹೊನ್ನಾವರ ,
ಪ್ರತಿನಿಧಿಸುವವರು,
ರಾಘವೇಂದ್ರ ಸುಬ್ರಾಯ ನಾಯ್ಕ,
ವಯಸ್ಸು ಸುಮಾರುಃ- 41 ವರ್ಷ,
ಮುಖ್ಯ ಕಾರ್ಯನಿರ್ವಾಹಕರು,
ತಾಲೂಕುಃ- ಹೊನ್ನಾವರ (ಉ.ಕ).

**-ವಿರುದ್ಧ-**

ಆರೋಪಿಯ ಹೆಸರುಃ- ಐಶಾ ಜುಬೇರ್ ಸಾಬ್,
ವಯಸ್ಸು ಸುಮಾರುಃ- 42 ವರ್ಷ,
ಸಾಕೀನಃ- ಟೊಂಕಾ-1,
ಅಂಚೆಃ- ಕಾಸರಕೋಡ,
ತಾಲೂಕುಃ- ಹೊನ್ನಾವರ (ಉ.ಕ).

****

**ದಂಡ ಪ್ರಕ್ರಿಯಾ ಸಂಹಿತೆ ಕಲಂ. 313 ರನ್ವಯ ಆರೋಪಿಯ ಹೇಳಿಕೆ.**

ಪ್ರಶ್ನೆಃ 1. ನೀವು ಪಿರ್ಯಾದುದಾರರ ಪರವಾಗಿ ಪ್ರಾಸಾ-1 ರವರ ಹೇಳಿಕೆಯನ್ನು ಕೇಳಿದ್ದೀರಾ?
ಆರೋಪಿಯ ಉತ್ತರಃ- ಕೇಳಿದ್ದೇನೆ.

ಪ್ರಶ್ನೆಃ 2. ಪ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿ ಸಂಸ್ಥೆಯಲ್ಲಿ ಶ್ರೀಮತಿ ನೂರ್ ಜಹಾನ್ ಬೇಗಂ ಶಂಶೂದ್ದೀನ್ ರವರು ರೂ.35,000/- ಸಾಲವನ್ನು ಪಡೆದುಕೊಂಡಿದ್ದು, ಸದರಿ ಸಾಲಕ್ಕೆ ಆರೋಪಿಯಾದ ನೀವು ಜಾಮೀನುದಾರರಾಗಿದ್ದು, ಸದರಿ ಸಾಲದ ಹಣವನ್ನು ಮರುಪಾವತಿಸುವ ಸಲುವಾಗಿ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಬ್ಯಾಂಕ್ ಆಫ್ ಬರೋಡಾ., ಹೊನ್ನಾವರ** ಶಾಖೆಯ ನಿಪಿ-1 ರ ಚೆಕ್ ನಂ.002372 ನ್ನು ದಿನಾಂಕ 23-12-2022, ರೂ.35,000/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ನಗದೀಕರಿಸಲು ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂಬ ಭರವಸೆಯನ್ನು ನೀಡಿರುತ್ತೀರೆಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?
ಆರೋಪಿಯ ಉತ್ತರಃ- ಸುಳ್ಳು.

ಪ್ರಶ್ನೆ: 3. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ನಗದೀಕರಿಸುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಕೆ.ಡಿ.ಸಿ.ಸಿ., ಬ್ಯಾಂಕ್., ಹೊನ್ನಾವರ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, "ಆರೋಪಿಯ ಖಾತೆಯಲ್ಲಿ ಸಾಕಷ್ಟು ಹಣವಿರುವುದಿಲ್ಲವೆಂದು" ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 30-12-2022 ರಂದು ನಿಪಿ-3 ರಂತೆ ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು.

ಪ್ರಶ್ನೆ: 4. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಕುರಿತು ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 18-01-2023 ರಂದು ನಿಪಿ-4 ರಂತೆ ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ದಿನಾಂಕ 20-01-2023 ರಂದು ನಿಪಿ-6 ರಂತೆ ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು.

ಪ್ರಶ್ನೆ5: ನಿಮ್ಮ ಪರವಾಗಿ ಏನಾದರೂ ಸಾಕ್ಷಿ ಇದೆಯೇ?

ಆರೋಪಿಯ ಉತ್ತರಃ- ಇದೆ.

ಪ್ರಶ್ನೆ6: ಸದ್ರಿ ಪ್ರಕರಣ ಕುರಿತು ನೀವು ಏನಾದರೂ ಹೇಳುವುದು ಇದೆಯೇ?

ಆರೋಪಿಯ ಉತ್ತರಃ- ಇಲ್ಲ.

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ)

**ಸಹಿ ಇದೆ.**

**ದಿನಾಂಕಃ- 29-09-2025.**

**(ಈರಣ್ಣ ಹುಣಶಿಕಟ್ಟಿ).,**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.,ಹೊನ್ನಾವರ.**

ಆರೋಪಿಯ ಸಹಿಃ- ಸಹಿ ಇದೆ.

****